Akashvani : Bangalore
National Bulletin In Kannada
28.12.2024 : 7.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
*******

ಮುಖ್ಯಾಂಶಗಳು:

೧. ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರ ಅಂತಿಮ ದರ್ಶನ ಪಡೆದ ಗಣ್ಯರು; ಇಂದು ಅಂತ್ಯ ಸಂಸ್ಕಾರ

೨. ಅಮೆರಿಕದಲ್ಲಿರುವ ಭಾರತೀಯ ರಾಯಭಾರಿ ಕಚೇರಿ ಅಧಿಕಾರಿಗಳೊಂದಿಗೆ ಡಾ.ಎಸ್.ಜೈಶಂಕರ್ ಚರ್ಚೆ

೩. ಕಿಂಗ್ಸ್ ಕಪ್ ಓಪನ್ ಬ್ಯಾಡ್ಮಿಂಟನ್; ಸೆಮಿಫೈನಲ್ ಪ್ರವೇಶಿಸಿದ ಭಾರತದ ಲಕ್ಷ್ಯ ಸೇನ್

೪. ಸಂತೋಷ್ ಟ್ರೋಫಿ ಫುಟ್ಬಾಲ್; ಕ್ವಾರ್ಟರ್ ಫೈನಲ್‌ನಲ್ಲಿ ಮೇಘಾಲಯ ವಿರುದ್ಧ ಸರ್ವೀಸಸ್ ತಂಡಕ್ಕೆ ಗೆಲುವು

*****

ನವದೆಹಲಿಯ ಕಾಂಗ್ರೆಸ್ ಪ್ರಧಾನ ಕಚೇರಿಯಲ್ಲಿ ಇಂದು ಮಾಜಿ ಪ್ರಧಾನಿ ಡಾ.ಮನಮೋಹನ್ ಸಿಂಗ್ ಅವರ ಪಾರ್ಥಿವ ಶರೀರದ ಅಂತಿಮ ದರ್ಶನದ ವ್ಯವಸ್ಥೆ ಮಾಡಲಾಗಿದೆ. ನಂತರ ಬೆಳಗ್ಗೆ ೯ ಗಂಟೆ ೩೦ ನಿಮಿಷಕ್ಕೆ ಕಾಂಗ್ರೆಸ್ ಪ್ರಧಾನ ಕಚೇರಿಯಿಂದ ನಿಗಮ್‌ಬೋಧ್ ಘಾಟ್‌ವರೆಗೆ ಅಂತಿಮ ಮೆರವಣಿಗೆ ಮೂಲಕ ಸಾಗಿ ಬಳಿಕ ಸಕಲ ಸರ್ಕಾರಿ ಗೌರವಗಳೊಂದಿಗೆ ಬೆಳಗ್ಗೆ ೧೧ ಗಂಟೆ ೪೫ ನಿಮಿಷಕ್ಕೆ ಅಂತ್ಯಸಂಸ್ಕಾರ ನಡೆಯಲಿದೆ ಎಂದು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ತಿಳಿಸಿದ್ದಾರೆ. ಮಾಜಿ ಪ್ರಧಾನಿ ಡಾ.ಮನಮೋಹನ್ ಸಿಂಗ್ ಅವರಿಗೆ ಅವರ ನವದೆಹಲಿಯ ನಿವಾಸದಲ್ಲಿ ನಿನ್ನೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಮತ್ತು ಪ್ರಧಾನಿ ನರೇಂದ್ರ ಮೋದಿ ಅಂತಿಮ ಗೌರವ ನಮನ ಸಲ್ಲಿಸಿದರು.

ಅವರೊಂದಿಗೆ ಕೇಂದ್ರ ಸಚಿವರಾದ ಅಮಿತ್ ಶಾ, ಜೆ.ಪಿ.ನಡ್ಡ, ಜ್ಯೋತಿರಾಧಿತ್ಯ ಸಿಂಧಿಯಾ, ಮಾಜಿ ಕಾಂಗ್ರೆಸ್ ಅಧ್ಯಕ್ಷೆ ಸೋನಿಯಾಗಾಂಧಿ ಸೇರಿದಂತೆ ಮತ್ತಿತರ ನಾಯಕರು ಡಾ.ಸಿಂಗ್ ಅವರಿಗೆ ಪುಷ್ಪನಮನ ಸಲ್ಲಿಸಿದರು. ಬಳಿಕ ವಿಡಿಯೊ ಸಂದೇಶದಲ್ಲಿ ಪ್ರಧಾನಿ ನರೇಂದ್ರ ಮೋದಿ, ಮಾಜಿ ಪ್ರಧಾನಿ ಡಾ.ಮನಮೋಹನ್ ಸಿಂಗ್ ಅವರ ನಿಧನದಿಂದ ದುಃಖವಾಗಿದೆ. ಎದುರಾಗುವ ಅಡೆತಡೆಗಳನ್ನು ಮೀರಿ ಹೆಚ್ಚಿನ ಸಾಧನೆಯನ್ನು ಹೇಗೆ ಮಾಡುವುದು ಎಂಬುದನ್ನು ತಮ್ಮ ಜೀವನದ ಮೂಲಕ ಮುಂದಿನ ಪೀಳಿಗೆಗೆ ಡಾ.ಮನಮೋಹನ್ ಸಿಂಗ್ ತೋರಿಸಿಕೊಟ್ಟಿದ್ದಾರೆ. ಒಬ್ಬ ಅದ್ಭುತ ಅರ್ಥಶಾಸ್ತ್ರಜ್ಞ ಮತ್ತು ನಾಯಕ ಎಂಬುದರ ಜೊತೆಗೆ ಅವರೊಬ್ಬ ಪ್ರಾಮಾಣಿಕ ಮನುಷ್ಯ ಎಂದು ಅವರನ್ನು ದೇಶ ಎಂದೆಂದಿಗೂ ಸ್ಮರಿಸಲಿದೆ ಎಂದಿದ್ದಾರೆ.

****ಧ್ವನಿ **** ಪ್ರಧಾನಿ

*****

ಡಾ. ಮನಮೋಹನ್ ಸಿಂಗ್ ಅವರು ಭಾರತದ ಪ್ರಸಿದ್ಧ ಅರ್ಥಶಾಸ್ತ್ರಜ್ಞರು ಮತ್ತು ರಾಜಕಾರಣಿಗಳಾಗಿದ್ದರು. ಅವರು ೨೦೦೪ ರಿಂದ ೨೦೧೪ ರವರೆಗೆ ಭಾರತದ ೧೩ನೇ ಪ್ರಧಾನಮಂತ್ರಿ ಆಗಿ ಸೇವೆ ಸಲ್ಲಿಸಿ, ದೇಶದ ಆರ್ಥಿಕ ಪ್ರಗತಿ ಮತ್ತು ಸಾಮಾಜಿಕ ಕಲ್ಯಾಣದ ಮಾರ್ಗವನ್ನು ಬೆಳಗಿಸಿದರು. ಅವರ ಶಿಸ್ತಿನ ನಾಯಕತ್ವ ಮತ್ತು ಸುಧಾರಣಾ ನೀತಿಗಳು ದೇಶದ ಆರ್ಥಿಕ ಪ್ರಗತಿಗೆ ಕಾರಣವಾದವು. ೧೯೩೨ರ ಸೆಪ್ಟೆಂಬರ್ ೨೬ರಂದು ಈಗಿನ ಪಾಕಿಸ್ತಾನದಲ್ಲಿರುವ ಪಂಜಾಬ್‌ನ ಗಹ್ ಎಂಬ ಊರಲ್ಲಿ ಜನಿಸಿದ ಅವರು, ಪಂಜಾಬ್ ವಿಶ್ವವಿದ್ಯಾಲಯ ಹಾಗೂ ಕೇಂಬ್ರಿಡ್ಜ್ ವಿಶ್ವವಿದ್ಯಾಲಯದಲ್ಲಿ ಉನ್ನತ ಶಿಕ್ಷಣ ಪಡೆದು, ಆಕ್ಸ್‌ಫರ್ಡ್ ವಿಶ್ವವಿದ್ಯಾಲಯದಿಂದ ಅರ್ಥಶಾಸ್ತ್ರದಲ್ಲಿ ಡಾಕ್ಟರೇಟ್ ಪದವಿ ಪಡೆದರು. ತಮ್ಮ ವೃತ್ತಿಜೀವನವನ್ನು ಅರ್ಥಶಾಸ್ತ್ರಜ್ಞರಾಗಿ ಆರಂಭಿಸಿದ ಅವರು ಮುಂದೆ ಭಾರತದ ಪ್ರಧಾನ ಆರ್ಥಿಕ ಸಲಹೆಗಾರ ಹಾಗೂ ರಿಸರ್ವ್ ಬ್ಯಾಂಕ್ ಗವರ್ನರ್ ಆಗಿ ದೇಶಕ್ಕೆ ಅಪಾರ ಕೊಡುಗೆ ನೀಡಿದರು. ೧೯೯೧ರಲ್ಲಿ ಭಾರತ ಆರ್ಥಿಕ ಬಿಕ್ಕಟ್ಟು ಎದುರಿಸುತ್ತಿದ್ದಾಗ, ಹಣಕಾಸು ಸಚಿವರಾಗಿದ್ದ ಅವರು ಕೈಗೊಂಡ ಆರ್ಥಿಕ ನೀತಿಗಳಿಗಾಗಿ ದೇಶ ಅವರನ್ನು ಎಂದಿಗೂ ಸ್ಮರಿಸುತ್ತದೆ. ೨೦೦೪ರಲ್ಲಿ ಭಾರತದ ೧೩ನೇ ಪ್ರಧಾನಮಂತ್ರಿಯಾಗಿ ಆಯ್ಕೆಯಾದ ಡಾ. ಸಿಂಗ್, ಹತ್ತು ವರ್ಷಗಳ ಅವಧಿಯಲ್ಲಿ ದೇಶದ ಆರ್ಥಿಕ ಮತ್ತು ಸಾಮಾಜಿಕ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಿದರು.

ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆ-ಮನ್ರೇಗಾ, ಮಾಹಿತಿ ಹಕ್ಕು ಕಾಯಿದೆ ಮತ್ತು ಭಾರತ-ಅಮೆರಿಕ ಅಣು ಒಪ್ಪಂದ ಸೇರಿದಂತೆ ಇತರ ಕ್ರಮಗಳಿಂದಾಗಿ ಹಲವಾರು ರಾಷ್ಟ್ರಗಳೊಂದಿಗೆ ಸಂಬಂಧಗಳನ್ನು ಬಲಪಡಿಸಿ, ದೇಶದ ಅಭಿವೃದ್ಧಿಗೆ ಭದ್ರ ಬುನಾದಿ ಹಾಕಿದರು. ೩೩ ವರ್ಷಗಳ ಕಾಲ ಸೇವೆ ಸಲ್ಲಿಸಿದ ನಂತರ ಈ ವರ್ಷ ಏಪ್ರಿಲ್‌ನಲ್ಲಿ ರಾಜ್ಯಸಭೆಯಿಂದ ಅವರು ನಿವೃತ್ತರಾದರು. ದೇಶಕ್ಕೆ ಅವರು ನೀಡಿದಂತಹ ಅಪಾರ ಕೊಡುಗೆಗಳಿಗೆ ಕೇಂದ್ರ ಸರ್ಕಾರ ಅವರಿಗೆ ೧೯೮೭ರಲ್ಲಿ ಪದ್ಮ ವಿಭೂಷಣ ಪುರಸ್ಕಾರ ನೀಡಿ ಗೌರವಿಸಿದೆ. ದೇಶದ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಕಾರಣ ಅವರು ವಿಶ್ವದ ಅನೇಕ ಪ್ರತಿಷ್ಠಿತ ವಿಶ್ವವಿದ್ಯಾಲಯಗಳಿಂದ ಗೌರವ ಡಾಕ್ಟರೇಟ್‌ಗಳನ್ನು ಪಡೆದಿದ್ದಾರೆ. ಶಾಂತ, ವಿದ್ವತ್‌ಪೂರ್ಣ ಹಾಗೂ ನಾಯಕತ್ವದ ಪ್ರತಿರೂಪವಾಗಿದ್ದ ಅವರು ಆರ್ಥಿಕ ಸುಧಾರಣೆ ಮತ್ತು ಅಭಿವೃದ್ಧಿಯ ದಾರಿಯಲ್ಲಿ ಭಾರತವನ್ನು ಮುನ್ನಡೆಸಿದ್ದರು.

*****

ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್, ವಾಷಿಂಗ್ಟನ್ ಡಿಸಿಯಲ್ಲಿ ಅಮೆರಿಕ ವಿದೇಶಾಂಗ ಸಚಿವ ಆಂಟೋನಿ ಬ್ಲಿಂಕನ್ ಅವರೊಂದಿಗೆ ಸಭೆ ನಡೆಸಿದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಡಾ.ಎಸ್.ಜೈಶಂಕರ್, ಕಳೆದ ನಾಲ್ಕು ವರ್ಷಗಳಲ್ಲಿ ಭಾರತ ಮತ್ತು ಅಮೆರಿಕಾ ಪಾಲುದಾರಿಕೆಯ ಪ್ರಗತಿಯನ್ನು ಸಭೆಯಲ್ಲಿ ಪರಿಶೀಲಿಸಲಾಗಿದೆ ಎಂದು ಹೇಳಿದರು.ಭಾರತ-ಅಮೆರಿಕ ಬಾಂಧವ್ಯ ಪರಸ್ಪರ ಹಿತಾಸಕ್ತಿ ಹಾಗೂ ಜಾಗತಿಕ ಒಳಿತಿಗಾಗಿ ನೆರವಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಇದಕ್ಕೂ ಮುನ್ನ ವಿದೇಶಾಂಗ ಸಚಿವ ಎಸ್.ಜೈಶಂಕರ್ ಅವರು, ಅಮೆರಿಕ ರಾಷ್ಟ್ರೀಯ ಭದ್ರತಾ ಸಲಹೆಗಾರ ಜೇಕ್ ಸುಲ್ಲಿವನ್ ಅವರನ್ನು ಬೇಟಿಯಾದರು. ಉಭಯ ನಾಯಕರು ಭಾರತ-ಅಮೆರಿಕ ಕಾರ್ಯತಂತ್ರದ ಪಾಲುದಾರಿಕೆಯ ಪ್ರಗತಿಯ ಕುರಿತು ಚರ್ಚೆಗಳನ್ನು ನಡೆಸಿದರು. ಅಲ್ಲದೇ, ಪ್ರಸ್ತುತ ಪ್ರಾದೇಶಿಕ ಮತ್ತು ಜಾಗತಿಕ ಬೆಳವಣಿಗೆಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು. ಇದೇ ವೇಳೆ ಸಚಿವ ಡಾ. ಎಸ್. ಜೈಶಂಕರ್ ನಿನ್ನೆ ವಾಷಿಂಗ್ಟನ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿಯ ತಂಡ ಮತ್ತು ನ್ಯೂಯಾರ್ಕ್, ಚಿಕಾಗೋ, ಸ್ಯಾನ್ ಫ್ರಾನ್ಸಿಸ್ಕೋ, ಸಿಯಾಟಲ್, ಹೂಸ್ಟನ್ ಮತ್ತು ಅಟ್ಲಾಂಟಾದಲ್ಲಿರುವ ಭಾರತೀಯ ರಾಯಭಾರ ಕಚೇರಿಗಳ ಅಧಿಕಾರಿಗಳನ್ನು ಭೇಟಿಯಾಗಿ ಚರ್ಚಿಸಿದರು.

ತಂತ್ರಜ್ಞಾನ, ವ್ಯಾಪಾರ ಮತ್ತು ಹೂಡಿಕೆಯ ಮೇಲೆ ಕೇಂದ್ರೀಕರಿಸುವ, ಭಾರತ-ಅಮೆರಿಕ ಪಾಲುದಾರಿಕೆಯನ್ನು ಗಾಢವಾಗಿಸುವ ಅವಕಾಶಗಳ ಕುರಿತು ಅವರು ಚರ್ಚಿಸಿದರು. ಅಮೆರಿಕದಲ್ಲಿರುವ ಭಾರತೀಯ ಸಮುದಾಯಕ್ಕೆ ಸೇವೆಯನ್ನು ಉತ್ತಮಗೊಳಿಸುವ ಕುರಿತು ಡಾ. ಜೈಶಂಕರ್ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು. ಜೈಶಂಕರ್ ಅವರು, ಇದೇ ೨೪ ರಿಂದ ೬ ದಿನಗಳ ಅಮೆರಿಕ ಪ್ರವಾಸದಲ್ಲಿದ್ದಾರೆ.

*****

ಗ್ರಾಮೀಣ ಪ್ರದೇಶಗಳಲ್ಲಿ ಮಾಸಿಕ ತಲಾ ವೆಚ್ಚವು ೨೦೨೨-೨೩ಕ್ಕೆ ಹೋಲಿಸಿದರೆ, ೨೦೨೩-೨೪ರಲ್ಲಿ ೯ ಪ್ರತಿಶತದಷ್ಟು ಹಾಗೂ ನಗರ ಪ್ರದೇಶಗಳಲ್ಲಿ ಸುಮಾರು ೮ ಪ್ರತಿಶತದಷ್ಟು ಹೆಚ್ಚಾಗಿದೆ. ಕೇಂದ್ರ ಅಂಕಿ-ಅಂಶ ಮತ್ತು ಯೋಜನಾ ಅನುಷ್ಠಾನ ಸಚಿವಾಲಯವು ಬಿಡುಗಡೆ ಮಾಡಿದ ಗೃಹ ಬಳಕೆಯ ವೆಚ್ಚ ಸಮೀಕ್ಷೆ ೨೦೨೩-೨೪ರ ವರದಿ ಪ್ರಕಾರ, ಗ್ರಾಮೀಣ ಪ್ರದೇಶದಲ್ಲಿ ಸರಾಸರಿ ಮಾಸಿಕ ತಲಾ ವೆಚ್ಚವು ೪ ಸಾವಿರದ ೧೨೨ ರೂಪಾಯಿ ಎಂದು ಅಂದಾಜಿಸಲಾಗಿದೆ. ಇದೇ ವೇಳೆ ನಗರ ಪ್ರದೇಶದಲ್ಲಿ ಸರಾಸರಿ ಮಾಸಿಕ ತಲಾ ವೆಚ್ಚವು ೬ ಸಾವಿರದ ೯೯೬ ರೂಪಾಯಿಗಳು ಎಂದು ಅಂದಾಜಿಸಲಾಗಿದೆ. ದೇಶಾದ್ಯಂತ ೨ ಲಕ್ಷ ೬೦ ಸಾವಿರಕ್ಕೂ ಹೆಚ್ಚು ಮನೆಗಳ ಸಮೀಕ್ಷೆ ನಡೆಸಲಾಗಿದೆ. ನಗರ ಬಳಕೆಗಿಂತ ಗ್ರಾಮೀಣ ಬಳಕೆಯು ವೇಗವಾಗಿ ಬೆಳೆಯುತ್ತಿದೆ ಎಂದು ವರದಿ ಸೂಚಿಸುತ್ತದೆ. ಸಮೀಕ್ಷೆಯ ಪ್ರಕಾರ ಗ್ರಾಮೀಣ ಪ್ರದೇಶದ ಮಾಸಿಕ ತಲಾ ವೆಚ್ಚದಲ್ಲಿ ಸುಮಾರು ಶೇಕಡ ೫೩ರಷ್ಟು ಮತ್ತು ನಗರ ಪ್ರದೇಶದ ಮಾಸಿಕ ತಲಾ ವೆಚ್ಚದಲ್ಲಿ ಶೇಕಡ ೬೦ರಷ್ಟು ಮನೆಯ ಸರಾಸರಿ ಮಾಸಿಕ ಖರ್ಚಿಗೆ ಆಹಾರೇತರ ವಸ್ತುಗಳು ಪ್ರಮುಖ ಕೊಡುಗೆಯಾಗಿ ಉಳಿದಿವೆ. ಪಾನೀಯಗಳು, ಉಪಹಾರಗಳು ಮತ್ತು ಸಂಸ್ಕರಿಸಿದ ಆಹಾರವು ೨೦೨೩-೨೪ರಲ್ಲಿ ಗ್ರಾಮೀಣ ಮತ್ತು ನಗರ ಮನೆಗಳ ಆಹಾರ ಪದಾರ್ಥಗಳಲ್ಲಿ ಪ್ರಮುಖ ವೆಚ್ಚದ ಪಾಲನ್ನು ಮುಂದುವರಿಸಿದೆ ಎಂದು ವರದಿ ತಿಳಿಸಿದೆ.

*****

ಪ್ರಧಾನಿ ನರೇಂದ್ರ ಮೋದಿ ಅವರು, ನಾಳೆ ಆಕಾಶವಾಣಿಯಲ್ಲಿ ಪ್ರತಿ ತಿಂಗಳು ಪ್ರಸಾರವಾಗುವ ತಮ್ಮ ಜನಪ್ರಿಯ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ದೇಶ ಮತ್ತು ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ಮಾತನಾಡಲಿದ್ದಾರೆ. ಬೆಳಗ್ಗೆ ೧೧ ಗಂಟೆಗೆ ಈ ಕಾರ್ಯಕ್ರಮ ಪ್ರಸಾರವಾಗಲಿದ್ದು, ಇದು ಮನ್ ಕಿ ಬಾತ್‌ನ ೧೧೭ನೇ ಅವತರಣಿಕೆಯಾಗಿದೆ.

ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳಲ್ಲಿ, ಆಕಾಶವಾಣಿ ಸುದ್ದಿ ಜಾಲತಾಣ, ಮೊಬೈಲ್ ಆಪ್ ಹಾಗೂ ಯೂಟ್ಯೂಬ್ ಚಾನಲ್‌ಗಳಲ್ಲೂ ಈ ಕಾರ್ಯಕ್ರಮ ಮೂಡಿಬರಲಿದೆ. ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವಾಲಯದ ಜಾಲತಾಣಗಳಲ್ಲೂ ಈ ಕಾರ್ಯಕ್ರಮ ಬಿತ್ತರಗೊಳ್ಳಲಿದೆ. ಹಿಂದಿ ಭಾಷೆಯ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲೂ ಈ ಕಾರ್ಯಕ್ರಮ ಮೂಡಿಬರಲಿದೆ.

*****

ಚೀನಾದ ಶೆನ್‌ಜೆನ್‌ನಲ್ಲಿ ನಡೆಯುತ್ತಿರುವ ಕಿಂಗ್ಸ್ ಕಪ್ ಓಪನ್ ಅಂತಾರಾಷ್ಟ್ರೀಯ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ಭಾರತದ ಷಟ್ಲರ್ ಲಕ್ಷ್ಯಸೇನ್ ಸೆಮಿಫೈನಲ್ ಪ್ರವೇಶಿಸಿದ್ದಾರೆ. ಲಕ್ಷ್ಯಸೇನ್ ಹಾಂಕಾಂಗ್‌ನ ಅಂಗಸ್ ಎನ್‌ಜಿ ಕಾ ಲಾಂಗ್ ಅವರನ್ನು ೧೦-೨೧, ೨೧-೧೩ ಮತ್ತು ೨೧-೧೩ ಸೆಟ್‌ಗಳಿಂದ ಮಣಿಸಿ, ಮುನ್ನಡೆ ಸಾಧಿಸಿದ್ದಾರೆ. ಇಂದು ನಡೆಯಲಿರುವ ಸೆಮಿಫೈನಲ್ ಪಂದ್ಯದಲ್ಲಿ ಅವರು ಚೀನಾದ ಹು ಜೆ ಆನ್ ವಿರುದ್ಧ ಸೆಣಸಲಿದ್ದಾರೆ.

*****

ಹೈದರಾಬಾದ್‌ನ ಡೆಕ್ಕನ್ ಅರೇನಾದಲ್ಲಿ ನಡೆಯುತ್ತಿರುವ ಸಂತೋಷ್ ಟ್ರೋಫಿ ಫುಟ್ಬಾಲ್ ಪಂದ್ಯಾವಳಿಯ ಮೂರನೇ ಕ್ವಾರ್ಟರ್ ಫೈನಲ್‌ನಲ್ಲಿ ಜಮ್ಮು ಮತ್ತು ಕಾಶ್ಮೀರ ತಂಡದ ವಿರುದ್ಧ ೧-೦ ಗೋಲುಗಳಿಂದ ಕೇರಳ ತಂಡ ಗೆಲುವು ಸಾಧಿಸಿದ್ದು, ಈ ಮೂಲಕ ಸೆಮಿಫೈನಲ್ ಪ್ರವೇಶಿಸಿದೆ. ನಾಲ್ಕನೇ ಕ್ವಾರ್ಟರ್ ಫೈನಲ್‌ನಲ್ಲಿ ಮೇಘಾಲಯ ತಂಡವನ್ನು ಸರ್ವಿಸಸ್ ತಂಡವು ೨-೧ ಗೋಲುಗಳಿಂದ ಮಣಿಸಿ, ಸೆಮಿಫೈನಲ್‌ಗೆ ಲಗ್ಗೆ ಇಟ್ಟಿದೆ. ಇದೇ ವೇಳೆ, ಮೊದಲ ಕ್ವಾರ್ಟರ್‌ಫೈನಲ್ ಪಂದ್ಯದಲ್ಲಿ ಒಡಿಶಾ ವಿರುದ್ಧ ೩-೧ ಗೋಲುಗಳ ಅಂತರದಿಂದ ಪಶ್ಚಿಮ ಬಂಗಾಳ ತಂಡ ಗೆಲುವು ಸಾಧಿಸಿ, ಸೆಮಿಫೈನಲ್ ಪ್ರವೇಶಿಸಿದೆ. ಮತ್ತೊಂದು ಕ್ವಾರ್ಟರ್‌ಫೈನಲ್ ಪಂದ್ಯದಲ್ಲಿ ಮಣಿಪುರ ತಂಡ, ದೆಹಲಿ ತಂಡವನ್ನು ಮಣಿಸಿ ಸೆಮಿಫೈನಲ್‌ಗೆ ಲಗ್ಗೆ ಇಟ್ಟಿದೆ.

*****

ಆಸ್ಟ್ರೇಲಿಯಾದ ಮೆಲ್ಬರ್ನ್‌ನಲ್ಲಿ ನಡೆಯುತ್ತಿರುವ ಬಾರ್ಡರ್-ಗವಾಸ್ಕರ್ ಟ್ರೋಫಿ ಟೆಸ್ಟ್ ಕ್ರಿಕೆಟ್ ಸರಣಿಯ ೪ನೇ ಪಂದ್ಯದ ೩ನೇ ದಿನದ ಆಟ ಮುಂದುವರಿದಿದೆ. ಇತ್ತೀಚಿನ ವರದಿ ಬಂದಾಗ, ಭಾರತ ೭ ವಿಕೆಟ್ ನಷ್ಟಕ್ಕೆ ೨೪೪ ರನ್ ಮಾಡಿ ಆಡುತ್ತಿದೆ. ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ ಆಸ್ಟ್ರೇಲಿಯಾ, ತನ್ನೆಲ್ಲಾ ವಿಕೆಟ್ ಕಳೆದುಕೊಂಡು ೪೭೪ ರನ್ ಗಳಿಸಿತು.

*****

ವಡೋದರಾದ ಕೊಟಂಬಿ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಅಂತಾರಾಷ್ಟ್ರೀಯ ಮಹಿಳಾ ಏಕದಿನ ಕ್ರಿಕೆಟ್ ಸರಣಿಯ ೩ನೇ ಹಾಗೂ ಅಂತಿಮ ಪಂದ್ಯದಲ್ಲಿ ವೆಸ್ಟ್ ಇಂಡೀಸ್ ವಿರುದ್ಧ ಭಾರತ ತಂಡ ೫ ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ. ಈ ಮೂಲಕ ಸರಣಿಯನ್ನು ೩-೦ ಅಂತರದಿಂದ ಭಾರತ ಮಹಿಳಾ ತಂಡ, ಕ್ಲೀನ್ ಸ್ವೀಪ್ ಮಾಡಿದೆ. ಟಾಸ್ ಗೆದ್ದು, ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿದ್ದ ವೆಸ್ಟ್ ಇಂಡೀಸ್, ೩೮.೫ ಓವರ್‌ಗಳಲ್ಲಿ ತನ್ನೆಲ್ಲಾ ವಿಕೆಟ್ ಕಳೆದುಕೊಂಡು ೧೬೨ ರನ್ ಗಳಿಸಿತು. ಭಾರತದ ಪರ ದೀಪ್ತಿ ಶರ್ಮ ೬ ವಿಕೆಟ್ ಕಬಳಿಸಿದರೆ, ರೇಣುಕಾ ಸಿಂಗ್ ೪ ವಿಕೆಟ್ ಪಡೆದರು. ವೆಸ್ಟ್ ಇಂಡೀಸ್ ತಂಡ ನೀಡಿದ ಸರಳ ಗುರಿ ಬೆನ್ನತ್ತಿದ ಭಾರತ ಮಹಿಳಾ ತಂಡ, ಕೇವಲ ೨೮.೨ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೧೬೭ ರನ್ ಗಳಿಸಿ, ಗೆಲುವಿನ ನಗೆ ಬೀರಿತು.

****